**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಸಹಕಾರಿ ನೂಲಿನ ಗಿರಣಿಗಳು ಬಳಸುವ ಪ್ರತಿ ಯೂನಿಟ್ ವಿದ್ಯುತ್‌ಗೆ ರೂ. 2ರಷ್ಟು ರಿಯಾಯಿತಿ ನೀಡಿ ಪ್ರೋತ್ಸಾಹಿಸುವ ಹೊಸ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಮಾನ್ಯ ಮುಖ್ಯಮಂತ್ರಿಗಳ 2017-18ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ ಸಂಖ್ಯೆ: 409 (7)
2. ಸರ್ಕಾರಿ ಆದೇಶ ಸಂಖ್ಯೆ: ವಾಕೈ 57 ಜಕೈಯೋ 2006, ದಿನಾಂಕ: 16.09.2006.
3. ಜವಳಿ ಅಭಿವೃದ್ಧಿ ಆಯುಕ್ತರ ಪತ್ರ ಸಂಖ್ಯೆ: ಕೈಜಇ/ಅಂಅಂ/ ಕ್ರಿ.ಯೋ/ 2017-18, ದಿನಾಂಕ: 24.04.2017.

*********

**ಪ್ರಸ್ತಾವನೆ:**

ಮೇಲೆ ಓದಲಾದ (1) ರ 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಯವರು ಕಂಡಿಕೆ: 409 (7)ರಲ್ಲಿ ಈ ಕೆಳಕಂಡಂತೆ ಘೋಷಿಸಿದ್ದಾರೆ.

"ಸಹಕಾರಿ ನೂಲಿನ ಗಿರಣಿಗಳನ್ನು ಪ್ರೋತ್ಸಾಹಿಸಲು ಪ್ರತಿ ಯೂನಿಟ್ ವಿದ್ಯತ್‌ಗೆ ರೂ. 2ರಷ್ಟು ಸಹಾಯಧನ.

**"Power subsidy of Rs. 2 per unit to encourage co-operative yarn mills"**

ಮೇಲೆ ಓದಲಾದ (2) ರ ಆದೇಶದಂತೆ, ಹಾಲಿ ಇರುವ ಮತ್ತು ಹೊಸ ವಿದ್ಯುತ್ ಮಗ್ಗಗಳ ಘಟಕಗಳು ಹೊಂದಿರುವ ಮಗ್ಗ ಪೂರ್ವಘಟಕದೊಂದಿಗೆ 20 ಹೆಚ್ ಪಿ ವರೆಗೆ ವಿದ್ಯುತ್ ಸಂಪರ್ಕಪಡೆದ ಘಟಕಗಳಿಗೆ ಮಾತ್ರ ಪ್ರತಿ ಯುನಿಟ್ ಗೆ ರೂ.1.25 ಪೈಸೆ ದರದಲ್ಲಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಪ್ರಸ್ತುತ ನೂಲಿನ ಗಿರಣಿಗಳಿಗೆ ಯಾವುದೇ ರೀತಿಯ ವಿದ್ಯುತ್ ರಿಯಾಯಿತಿ/ ಸಹಾಯದನವನ್ನು ನೀಡುತ್ತಿರುವುದಿಲ್ಲ.

ಪ್ರಸ್ತುತ ಸಹಕಾರಿ ನೂಲಿನ ಗಿರಣಿಗಳು ಉಪಯೋಗಿಸುತ್ತಿರುವ ವಿದ್ಯುತ್ ದರವು ಪ್ರತಿ ಯುನಿಟ್‌ಗೆ ರೂ. 6.00 ರಿಂದ 7.50 ಗಳ ವರೆಗೆ ಪಾವತಿಸಬೇಕಾಗಿರುವುದರಿಂದ ನೂಲಿನ ಗಿರಣಿಗಳ ಉತ್ಪಾದನಾ ವೆಚ್ಚವು ಹೆಚ್ಚಾಗಿದ್ದು, ಇಂದಿನ ಸ್ಪರ್ಧಾತ್ಮಕ ಮಾರುಕಟ್ಟೆಯಲ್ಲಿ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡಲು ಕಷ್ಟಸಾಧ್ಯವಾಗಿದೆ. ಇದರಿಂದಾಗಿ ರಾಜ್ಯದ ಸಹಕಾರಿ ನೂಲಿನ ಗಿರಣಿಗಳು ನಷ್ಟದಲ್ಲಿರುತ್ತವೆ. ಸಹಕಾರಿ ನೂಲಿನ ಗಿರಣಿಗಳು ಬಳಸುವ ಪ್ರತಿ ಯುನಿಟ್ ವಿದ್ಯುತ್‌ಗೆ ರೂ. 2ರಷ್ಟು ರಿಯಾಯಿತಿ ನೀಡಿದಲ್ಲಿ ಸಹಕಾರಿ ನೂಲಿನ ಗಿರಣಿಗಳು ಉತ್ಪಾದಿಸುವ ಉತ್ಪಾದನಾ ವೆಚ್ಚವನ್ನು ಕಡಿಮೆಗೊಳಿಸಿದಂತಾಗುತ್ತದೆ. ಇದರಿಂದ ಸಹಕಾರಿ ನೂಲಿನ ಗಿರಣಿಗಳಿಗೆ ಆಗುತ್ತಿದ್ದ ನಷ್ಟವನ್ನು ಕಡಿತಗೊಳಿಸಿ, ಗಿರಣಿಗಳು ಲಾಭದಾಯಕವಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತದೆ. ಸಹಕಾರಿ ನೂಲಿನ ಗಿರಣಿಗಳನ್ನು ಈ ರೀತಿ ಪ್ರೋತ್ಸಾಹಿಸುವುದರಿಂದ, ಗಿರಣಿಗಳು ಉತ್ಪಾದನೆಯಲ್ಲಿ ತೊಡಗಿ ಹೆಚ್ಚಿನ ಜನರಿಗೆ ಉದ್ಯೋಗವಕಾಶವನ್ನು ಕಲ್ಪಿಸಿದಂತಾಗುತ್ತದೆ.

..2

2017-18ನೇ ಸಾಲಿನ ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯ ಲೆಕ್ಕ ಶೀರ್ಷಿಕೆ : 2851-00-103-0-62-106 ರಲ್ಲಿ ಲಭ್ಯವಿರುವ ಒಟ್ಟು ಅನುದಾನ ರೂ. 2450.00 ಲಕ್ಷಗಳಲ್ಲಿ ಈ ಮೇಲೆ ಘೋಷಿಸಲಾದ ಹೊಸ ಯೋಜನೆಗೆ ರೂ. 250.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ. ಸಹಕಾರಿ ನೂಲಿನ ಗಿರಣಿಗಳು ಬಳಸುವ ಪ್ರತಿ ಯೂನಿಟ್ ವಿದ್ಯುತ್‌ಗೆ ರೂ. 2ರಷ್ಟು ರಿಯಾಯಿತಿ ನೀಡಿ ಪ್ರೋತ್ಸಾಹಿಸುವ ಹೊಸ ಯೋಜನೆಗೆ ಸರ್ಕಾರದ ಸಹಾಯಧನ ನೀಡಲು ಉದ್ದೇಶಿಸಲಾಗಿದೆ.

ಈ ಹೊಸ ಯೋಜನೆಯನ್ನು ಸಹಕಾರಿ ಕಾಯ್ದೆ ಅನ್ವಯ ನೊಂದಣಿಯಾದ ರಾಜ್ಯದಲ್ಲಿರುವ ಎಲ್ಲಾ ಸಹಕಾರಿ ನೂಲಿನ ಗಿರಣಿಗಳು ಹಾಗೂ ಸದರಿ ಗಿರಣಿಗಳು ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದರೂ ಸಹ ಈ ಯೋಜನೆಯ ಸೌಲಭ್ಯವನ್ನು ಒದಗಿಸಲು ಯೋಜಿಸಲಾಗಿದೆ. ಈ ಯೋಜನೆಯನ್ನು ಪ್ರಸ್ತುತ ಸಾಲಿನಿಂದ ಜಾರಿಗೆ ತರಲು ಉದ್ದೇಶಿಸಲಾಗಿದೆ.

ಆರ್ಥಿಕ ಇಲಾಖೆಯು ಈ ಯೋಜನೆಗೆ ಕೆಳಕಂಡಂತೆ ಸಹಮತಿಯನ್ನು ನೀಡಿರುತ್ತದೆ.

FD agrees to the proposal subject to the following conditions:-

a) The power subsidy given to units must be within allocated budget. AD must ensure no arrears are built up.
b) A proper system of authentication must be set up in which each of the claims submitted by ESCOMs must be verified by AD before releasing the subsidy

ಓದಲಾದ (3) ರ ಜವಳಿ ಅಭಿವೃದ್ಧಿ ಆಯುಕ್ತರ ಪತ್ರದಲ್ಲಿ ಸದರಿ ಯೋಜನೆಗೆ ಪ್ರಸ್ತಾವನೆ ಸಲ್ಲಿಸಿ ಯೋಜನೆ ಅನುಷ್ಠಾನಗೊಳಸಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಜವಳಿ ಅಭಿವೃದ್ಧಿ ಆಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ವಾಕೈ 30 ಜಕೈಯೋ 2017, ಬೆಂಗಳೂರು, ದಿನಾಂಕ: 07.06.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ, ಸಹಕಾರಿ ನೂಲಿನ ಗಿರಣಿಗಳನ್ನು ಪ್ರೋತ್ಸಾಹಿಸಲು ಗಿರಣಿಗಳು ಉಪಯೋಗಿಸುವ ಪ್ರತಿ ಯೂನಿಟ್ ವಿದ್ಯುತ್‌ಗೆ ರೂ. 2ರಂತೆ ಸಹಾಯಧನವನ್ನು ರಾಜ್ಯ ಸರ್ಕಾರದಿಂದ ನೀಡುವ ಯೋಜನೆಗೆ ಕೆಳಕಂಡ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

- ವಿದ್ಯುತ್ ಸಬ್ಸಿಡಿಯು ಆಯವ್ಯಯದ ಹಂಚಿಕೆಯ ಮಿತಿಗೊಳಪಟ್ಟಿದ್ದು, ಯಾವುದೇ ರೀತಿಯಲ್ಲಿ ವಿದ್ಯುತ್ ರಿಯಾಯಿತಿ ಬಾಬ್ತಿನ ಬಾಕಿ (arrears) ಮುಂದುವರೆಯಬಾರದು.
- ವಿವಿಧ ಎಸ್ಕಾಂಗಳಿಂದ ವಿದ್ಯುತ್ ಸಬ್ಸಿಡಿಗಾಗಿ ಸಲ್ಲಿಸಲಾಗುವ ಕ್ಲೈಮ್ಸ್‌ಗಳಿಗೆ ಸಂಬಂಧಿಸಿದಂತೆ ವಿದ್ಯುತ್ ಸಹಾಯಧನವನ್ನು ಬಿಡುಗಡೆ ಮಾಡುವ ಮುಂಚೆ, ಪ್ರತಿಯೊಂದು ಕ್ಲೈಮ್ಸ್‌ಗಳನ್ನು ಸೂಕ್ತ ರೀತಿಯಲ್ಲಿ ತನಿಖೆ ನಡೆಸಿ ದೃಢೀಕರಿಸುವ ವ್ಯವಸ್ಥೆಯನ್ನು ಅಳವಡಿಸತಕ್ಕದ್ದು.

- ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಪೂರ್ವದಲ್ಲಿ ಮಾರ್ಗಸೂಚಿಯನ್ನು ತಯಾರಿಸಿ, ಕಡ್ಡಾಯವಾಗಿ ಸರ್ಕಾರದ ಅನುಮೋದನೆಯನ್ನು ಪಡೆದು ಅನುಷ್ಠಾನಗೊಳಿಸತಕ್ಕದ್ದು.

ಈ ಯೋಜನೆಯ ವೆಚ್ಚವನ್ನು 2017-18ನೇ ಸಾಲಿನ ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯ ಲೆಕ್ಕ ಶೀರ್ಷಿಕೆ **2851-00-103-0-62-106** ಅಡಿಯಲ್ಲಿ ಲಭ್ಯವಿರುವ ಅನುದಾನದಿಂದ ರೂ. 250.00 ಲಕ್ಷಗಳ ವೆಚ್ಚ ಭರಿಸಲು ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ.212.ವೆಚ್ಚ-1/2017 ದಿನಾಂಕ 01-06-2017 ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ ಪಿ.ಡಿ.25.ಎಫ್.ಆರ್.ಓ/2017 ದಿನಾಂಕ 11-05-2017 ರಲ್ಲಿ ನೀಡಿದ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಡಿ.ಎಸ್. ಜೋಗೋಜೆ)**
ಸರ್ಕಾರದ ಉಪ ಕಾರ್ಯದರ್ಶಿ (ಜವಳಿ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ
7/6/17

ಇವರಿಗೆ ;

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಒದಗಿಸಲು ಕೋರಿದೆ (ಮುಖ ಪತ್ರದೊಂದಿಗೆ ಕಳುಹಿಸಿದೆ).

ಪ್ರತಿಗಳು:

1. ಮಹಾಲೇಖಪಾಲರು, (ಲೆಕ್ಕಪತ್ರ:ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಸನ್ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಶುಭೋದಯ ಕಾಂಪ್ಲೇಕ್ಸ್, ನಂ.86, ರೈಲ್ವೆ ಸಮಾನಾಂತರ ರಸ್ತೆ, ಕುಮಾರ ಪಾರ್ಕ್ ಪಶ್ಚಿಮ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.
7. ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ ವೆಚ್ಚ-1, ವಿಧಾನ ಸೌಧ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ, ಕಿತ್ತೂರು ರಾಣಿ ಚೆನ್ನಮ್ಮ ವೃತ್ತ, ಒಕ್ಕಲಿಗರ ಭವನ, ಬೆಂಗಳೂರು-560 027.
9. ಅಧ್ಯಕ್ಷರು, ಸಹಕಾರಿ ನೂಲಿನ ಗಿರಣಿಗಳ ಮಹಾಮಂಡಳ, ಕನ್ನಿಂಗ್‌ಹ್ಯಾಂರೋಡ್, ಬೆಂಗಳೂರು.
10. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
11. ಜಂಟಿ ನಿರ್ದೇಶಕರು, ಜಿಲ್ಲಾ ಖಜಾನೆ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
13. ಸಂಕಲನಕಾರರು, ಮಾಸಿಕ ರಾಜ್ಯ ಪತ್ರ